ಮೈಸೂರಿನ 7ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದಲ್ಲಿ
ಸ್ಪೇಷಲ್ ಕೇಸು ಸಂಖ್ಯೆ 361/2023

| | | |
|---|---|---|
| ಸಾಕ್ಷಿದಾರರ ಹೆಸರು | : ಕುಮಾರ | ಪಿಡಬ್ಲ್ಯೂ : 2 |
| ತಂದೆಯ ಹೆಸರು | : ಚೆಲುವಯ್ಯ | ಸಿಡಬ್ಲ್ಯೂ : 2 |
| ವಯಸ್ಸು | : 54 ವರ್ಷ | |
| ಉದ್ಯೋಗ | : ಕೂಲಿ | |
| ವಾಸಸ್ಥಳ | : ದೊಡ್ಡನೇರಳೆ ಗ್ರಾಮ, ಮೈಸೂರು. | |

**ಸಾಕ್ಷಿಯನ್ನು ಈ ದಿನ ದಿಃ 22.07.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದಃ**

*1.* ಈಗ ತೋರಿಸಿದ ನೋಟಿಸಿನಲ್ಲಿ ನನ್ನ ಸಹಿ ಇದೆ. ಸದರಿ ನೋಟಿಸನ್ನು ನಿ.ಪಿ.8 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ.8(ಎ) ಎಂದು ಗುರುತಿಸಲಾಯಿತು. ಈಗ್ಗೆ 3 ವರ್ಷಗಳ ಹಿಂದೆ ಮಧ್ಯಾಹ್ನ ನಾನು ನಮ್ಮ ಜಮೀನಿನಲ್ಲಿ ದನ ಮೇಯಿಸುತ್ತಿದ್ದಾಗ ಪೊಲೀಸರು ಬಂದು ನಿಪಿ–8 ಕ್ಕೆ ಸಹಿ ಪಡೆದರು. ಯಾವ ಕಾರಣಕ್ಕಾಗಿ ನಿಪಿ–8 ಕ್ಕೆ ಸಹಿ ಪಡೆದಿದ್ದಾರೆ ಮತ್ತು ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಈಗ ತೋರಿಸಿದ ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆಯು ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿ.ಪಿ.2 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ.2(ಬಿ) ಎಂದು ಗುರುತಿಸಲಾಯಿತು. ಈಗ ತೋರಿಸಿದ ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆ ಶೋಧನಾ ಸಮುಚ್ಚಿತ್ತ ಆಧಾರ ಪತ್ರವಾಗಿದ್ದು, ಅದನ್ನು ಈಗಾಗಲೇ ನಿ.ಪಿ.3 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ.3(ಬಿ) ಎಂದು ಗುರುತಿಸಲಾಯಿತು. ಈಗ ತೋರಿಸಿದ ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆ ಸ್ವತ್ತುಗಳ ಪಟ್ಟಿಯಾಗಿದ್ದು, ಅದನ್ನು ಈಗಾಗಲೇ ನಿ.ಪಿ.4 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ.4(ಬಿ) ಎಂದು ಗುರುತಿಸಲಾಯಿತು. ಈಗ ತೋರಿಸಿದ ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆ ಮಾದರಿ ಸೀಲಾಗಿದ್ದು, ಅದನ್ನು ಈಗಾಗಲೇ ನಿ.ಪಿ.5 ಎಂದು ಗುರುತಿಸಿದ್ದು,

ಸಾಕ್ಷಿಯ ಸಹಿಯನ್ನು ನಿ.ಪಿ.**5**(ಬಿ) ಎಂದು ಗುರುತಿಸಲಾಯಿತು. ನಿಪಿ–**2** ರಿಂದ **5** ಕ್ಕೂ ಸಹ ನಿಪಿ–**8** ಕ್ಕೆ ಸಹಿ ಮಾಡಿದಾಗ ಸಹಿ ಮಾಡಿದ್ದೇನೆ. ನಿಪಿ–**8, 2** ರಿಂದ **5** ರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ, ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ಅದೇ ರೀತಿ ನನಗೆ ತೋರಿಸಿದ **8** ಪೋಟೊಗಳನ್ನು ಎಲ್ಲಿ ಯಾವ ಕಾರಣಕ್ಕಾಗಿ ತೆಗೆದಿದ್ದಾರೆ ಎಂದು ನನಗೆ ಗೊತ್ತಿಲ್ಲ. ಸದರಿ ಎಂಟು ಪೋಟೊಗಳನ್ನು ಈಗಾಗಲೇ ಒಟ್ಟಾಗಿ ನಿಪಿ–**6** ಎಂದು ಗುರುತಿಸಲಾಗಿದೆ. ಪೊಲೀಸರು ನನ್ನ ಯಾವುದೇ ಹೇಳಿಕೆ ಪಡೆದುಕೊಂಡಿಲ್ಲ. ಇಷ್ಟನ್ನು ಬಿಟ್ಟು ಬೇರೆ ವಿಚಾರ ಗೊತ್ತಿಲ್ಲ.

***(ಈ ಹಂತದಲ್ಲಿ ಮಾನ್ಯ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ ಮೇರೆಗೆ, ಪರಿಶೀಲಿಸಿ ಸಕಾರಣಗಳಿದ್ದರಿಂದ ಅನುಮತಿ ನೀಡಲಾಯಿತು.)***

**ಪಾಟೀ ಸವಾಲುಃ ಮಾನ್ಯ ಸರ್ಕಾರಿ ಅಭಿಯೋಜಕರಿಂದಃ**

2. ದಿಃ 01.10.2022 ರಂದು ಬೆಳಿಗ್ಗೆ 9.45 ಗಂಟೆ ಸಮಯದಲ್ಲಿ ನಾನು ಹಾಗೂ ಚಾಸಾ1–ದೇವೇಂದ್ರನಾಥ್ ರವರು ನಮ್ಮ ಗ್ರಾಮದಲ್ಲಿ ಇದ್ದಾಗ ಅಬಕಾರಿ ಅಧಿಕಾರಿಗಳು ನನಗೆ ಹಾಗೂ ಚಾಸಾ–1 ರವರಿಗೆ ಪಿರಿಯಾಪಟ್ಟಣ ತಾಲ್ಲೂಕಿನ ದೊಡ್ಡನೇರಳೆ ಗ್ರಾಮದ ಶಹಬಾಜ್ ರವರಿಗೆ ಸೇರಿದ ಇಟ್ಟಿಗೆ ಪ್ಯಾಕ್ಟರಿಯಲ್ಲಿ ಕಾರ್ಮಿಕರಿಗೆ ನಿರ್ಮಿಸಿ ಕೊಟ್ಟಿರುವ ಶೌಚಾಲಯದ ಪಕ್ಕದಲ್ಲಿ ಗಾಂಜಾ ಗಿಡ ಬೆಳೆದಿರುವ ಬಗ್ಗೆ ಮಾಹಿತಿ ಬಂದಿದೆ ದಾಳಿ ಕಾಲಕ್ಕೆ ಪಂಚರಾಗಿ ಸಹಕರಿಸಬೇಕೆಂದು ಹೇಳಿ ನಿಪಿ–8 ರಂತೆ ನೋಟಿಸು ನೀಡಿದ್ದಾರೆ ಎಂದರೆ ಸರಿಯಲ್ಲ. ನಂತರ ಅಬಕಾರಿ ಅಧಿಕಾರಿಗಳು ನನ್ನನ್ನು ಹಾಗೂ ಚಾಸಾ–1 ರವರನ್ನು ಸದರಿ ಸ್ಥಳಕ್ಕೆ ಕರೆದುಕೊಂಡು ಹೋಗಿದ್ದು ಕಲ್ಲಾರ್ ಶೀಟ್ ನಿಂದ ಕೂಡಿದ್ದ ಶೌಚಾಲಯದ ಪಕ್ಕದಲ್ಲಿ ಒಂದು ಗಾಂಜಾ ಗಿಡ ಬೆಳೆದಿದ್ದು, ಅದು ಹೂವು ಹಾಗೂ ತೆನೆಗಳಿಂದ ಕೂಡಿದ ಗಾಂಜಾ ಗಿಡ ಆಗಿದ್ದು, ಅದನ್ನು ಮರೆಮಾಚಲು ಸುತ್ತಲೂ ಅರಳು ಗಿಡಗಳನ್ನು ಬೆಳೆಸಲಾಗಿದ್ದು, ಸದರಿ ಗಿಡಕ್ಕೆ ಪಾತಿ ಮಾಡಿ ನೀರು ಹಾಯಿಸಲು ವ್ಯವಸ್ಥೆ ಮಾಡಿದ್ದು, ಅದನ್ನು ಬುಡ ಸಹಿತ ಪರಿಶೀಲಿಸಲಾಗಿ ಅದು 15 ಅಡಿ ಎತ್ತರ 5 ಅಡಿ ಅಗಲ ಹಾಗೂ 10 ಇಂಚು ಕಾಂಡದ

ಸುತ್ತಳತೆ ಹೊಂದಿದ್ದು, ಅದನ್ನು ನಮ್ಮ ಸಮಕ್ಷಮ ತೂಕ ಮಾಡಿದಾಗ 15.00 ಕೆ.ಜಿ ಇದ್ದು, ಅದನ್ನು ಬಿಳಿ ಬಟ್ಟೆ ಚೀಲದಲ್ಲಿ ಹಾಕಿ ಸೀಲ್ ನಂಬರ್ 310 ಹಾಕಿ ಸೀಲ್ ಮಾಡಿ ಬೆಳಿಗ್ಗೆ 9.45 ರಿಂದ 11.15 ಗಂಟೆಯವರೆಗೆ ನಿಪಿ-2ರಂತೆ ಮಹಜರ್ ಮಾಡಿ ಅಮಾನತ್ತುಪಡಿಸಿಕೊಂಡು ಸ್ಥಳದಲ್ಲಿ ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ಈಗ ಓದಿ ಹೇಳಿದಂತೆ ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿಪಿ- ಎಂದು ಗುರುತಿಸಲಾಯಿತು. ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಿಸಲಾಯಿತು)**

**ಓ ಹೇ ಕೇ ಸ ಇ ಎ ಒ**

**7ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು**
**ಮೈಸೂರು.**